ಸಂಖ್ಯೆ:ಇಡಿ 33 ಯುಇಸಿ 2012

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿ:07-08-2012.

**ಸುತ್ತೋಲೆ**

**ವಿಷಯ:** ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಹೆಸರಿನಲ್ಲಿ ಹಣ ಸಂಗ್ರಹಿಸುವ ಬಗ್ಗೆ.

***

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ/ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಹೆಸರಿನಲ್ಲಿ ಪ್ರತಿ ವಿದ್ಯಾರ್ಥಿಯಿಂದ ವರ್ಷಕ್ಕೊಮ್ಮೆ ಕಾಲೇಜಿನ ಪ್ರವೇಶಾತಿ ಸಮಯದಲ್ಲಿ ಪ್ರವೇಶ ಶುಲ್ಕದ ಜೊತೆಗೆ ರೂ.150/-ರಿಂದ ರೂ.600/-ರವರೆಗೆ ಮಾತ್ರ ಸಂದರ್ಭಾನುಸಾರ ಕಾಲೇಜು ಅಭಿವೃದ್ಧಿ ಶುಲ್ಕ ಸಂಗ್ರಹಿಸಲು ಸರ್ಕಾರದ ಅನುಮತಿ ನೀಡಲಾಗಿದೆ. ಹಾಗೂ ದಾನಿಗಳಿಂದ, ಸಂಘ ಸಂಸ್ಥೆಗಳಿಂದ, ವಿದ್ಯಾರ್ಥಿಗಳು /ಪೋಷಕರಿಂದ ಹೀಗೆ ಸಂಗ್ರಹಿಸಲಾದ ಹಣಕ್ಕೆ ಕಡ್ಡಾಯವಾಗಿ ರಶೀದಿಯನ್ನು ನೀಡತಕ್ಕದ್ದು. ಸಂಗ್ರಹಿಸಲಾದ ಹಣವನ್ನು ಪ್ರಾಂಶುಪಾಲರು ಪ್ರತ್ಯೇಕ ಬ್ಯಾಂಕ್ ಖಾತೆಯನ್ನು ತೆರೆದು ದಿನವಹಿ ಹಾಗೂ ನಗದು ಪುಸ್ತಕಗಳನ್ನು ಕಡ್ಡಾಯವಾಗಿ ನಿರ್ವಹಿಸಿ ಕಾಲೇಜು ಅಭಿವೃದ್ಧಿ ಸಮಿತಿಯ ಸಹಮತಿ ಪಡೆದು ಕಾಲೇಜಿನ ಅಭಿವೃದ್ಧಿ ಕೆಲಸಗಳಿಗೆ ಮಾತ್ರ ಉಪಯೋಗಿಸಲು ತಿಳಿಸಲಾಗಿದೆ. ಒಂದು ವೇಳೆ ವಿದ್ಯಾರ್ಥಿಗಳಿಂದ ಮೇಲೆ ತಿಳಿಸಲಾದ ಮೊತ್ತಕ್ಕಿಂತ ಹೆಚ್ಚಿನ ಹಣ ಸಂಗ್ರಹಣೆ/ದುರುಪಯೋಗ ಮಾಡಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಇದೇ ಸಮಸಂಖ್ಯೆಯ ದಿನಾಂಕ:02-05-2012ರ ಸರ್ಕಾರಿ ಸುತ್ತೋಲೆಯನ್ನು ಹಿಂದಕ್ಕೆ ಪಡೆಯಲಾಗಿದೆ.

(ಬಿ.ಮನೋಹರ್) 7/8/2012
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ. (ಕಾಲೇಜು ಶಿಕ್ಷಣ)

## ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343901, 22343904

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು - 560 001.

ಸಂಖ್ಯೆ: ಕಾಶಿಇ/ಶೈವಿ/49/ಕಾ.ಅ.ಶುಲ್ಕ/2012-13

ದಿನಾಂಕ: 17.08.2012

ಮೇಲ್ಕಂಡ ***ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ/33/ಯುಇಸಿ/2012, ದಿನಾಂಕ:07.08.2012ನ್ನು*** ಈ ಕೆಳಕಂಡವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

17/8/12
ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗಾ. - *ಮೇಲ್ಕಂಡ ಸರ್ಕಾರದ ಸುತ್ತೋಲೆಯನ್ನು ತಮ್ಮ ಕಛೇರಿ ವ್ಯಾಪ್ತಿಗೊಳಪಡುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಿಗೆ ರವಾನಿಸಲು ಸೂಚಿಸಿದೆ.*
2) ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ).

**ಪ್ರತಿಯನ್ನು:**

1) ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಹಾಗೂ ಜಂಟಿ ನಿರ್ದೇಶಕರ ಆಪ್ತ ಶಾಖೆಗೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.